4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಧುಗಿರಿ

ಎಸ್.ಸಿ. ನಂಃ 5033/2019

**(ದಿನಾಂಕಃ 04-10-2021 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.)**

ಹೆಸರುಃ ಮರಿಯಪ್ಪ ಪಿ.ಡಬ್ಲ್ಯೂ- 19.
ತಂದೆಯ ಹೆಸರುಃ ಲಿಂಗಪ್ಪ ಸಿ.ಡಬ್ಲ್ಯೂ- 27.
ವಯಸ್ಸುಃ 35 ವರ್ಷ
ಉದ್ಯೋಗಃ ಪಿ.ಡಬ್ಲ್ಯೂಡಿ ಕಾಂಟ್ರಾಕ್ಟ್ ಕೆಲಸ
ವಾಸಃ ಕೊರಟಗೆರೆ.

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ಒಂದು ದಾಖಲೆ ತೋರಿಸಿ ತನ್ನ ಸಹಿ ಗುರುತಿಸಲು ಕೋರಲಾಗಿ, ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಅಮಾನತ್ತು ಪಂಚನಾಮೆ ಆಗಿದ್ದು, ಅದನ್ನು ನಿಪಿ-32 ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-32(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸನ್ 2019 ರಲ್ಲಿ ಕೊರಟಗೆರೆ ಪೋಲಿಸ್ ಠಾಣೆಗೆ ನನ್ನ ತಮ್ಮನ ವಾಹನ ಬಿಡಿಸಿಕೊಳ್ಳಲು ಹೋದಾಗ ಮಾಡಿದ್ದೇನೆ. ಅದರಲ್ಲಿ ಬರೆದ ವಿಚಾರ ಗೊತ್ತಿಲ್ಲ. ಪೋಲಿಸರು ಸಹಿ ಹಾಕಲು ಹೇಳಿದ್ದರಿಂದ ಹಾಕಿದ್ದೇನೆ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಳ್ಳಲಿಲ್ಲ.

***(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಪಿಪಿ ಯವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಪರಿಶೀಲಿಸಿ, ಅನುಮತಿ ನೀಡಲಾಯಿತು.)***

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕಃ 09-01-2019 ರಂದು ಬೆಳಿಗ್ಗೆ 7-30 ರಿಂದ 8-30 ಗಂಟೆಯವರೆಗೆ ಕೊರಟಗೆರೆ ಪೋಲಿಸ್ ಠಾಣೆಯಲ್ಲಿ ನಿಪಿ-32 ದಾಖಲೆಗೆ ಸಹಿ ಮಾಡಿದ್ದೇನೆ ಎಂದರೆ ಸರಿ. ಆ ಕಾಲಕ್ಕೆ ಮುಖ್ಯಪೇದೆ ದಯಾನಂದ್ ರವರು ನನಗೆ ಈಗ ತೋರಿಸಿದ ಅರ್ಧತೋಳಿನ ಶರ್ಟ್, ಕಪ್ಪು ಬಣ್ಣದ ನೈಟ್ ಪ್ಯಾಂಟ್ ಹಾಗೂ ನೀಲಿ ಕಾಚಾ ಮತ್ತು ಕೈಗೆ ಕಟ್ಟುವ ಕಪ್ಪು ದಾರ ಹಾಜರುಪಡಿಸಿದರು ಎಂದರೆ ಸರಿಯಲ್ಲ. ಸದರಿ ವಸ್ತುಗಳನ್ನು ಸಾಂಕೇತಿಕವಾಗಿ ಈಗಾಗಲೇ ಮು.ಮಾ-7 ರಿಂದ 10 ಎಂದು ಗುರುತಿಸಲಾಗಿದೆ. ಸದರಿ ವಸ್ತುಗಳಿಗೆ ಅಂಟಿಸಿದ ಚೀಟಿ ಮೇಲೆ ನನ್ನ ಸಹಿ ಇದೆ ಎಂದರೆ ಸರಿ. ಸಾಕ್ಷಿಯು ಸದರಿ ಸಹಿಗಳನ್ನು ಗುರುತಿಸಿದ್ದು, ಅವುಗಳನ್ನು ಅನುಕ್ರಮವಾಗಿ ನಿಪಿ-33 ರಿಂದ 36 ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಮು.ಮಾ-7 ರಿಂದ 10 ನೇದ್ದವುಗಳನ್ನು ಅಮಾನತ್ತುಪಡಿಸಿಕೊಂಡಿದ್ದರೂ ಸಹ ಈಗ ಆರೋಪಿತರಿಗೆ ಹೆದರಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರಃ ಶ್ರೀ. ಟಿ.ಎಸ್.ಕೆ ವಕೀಲರಿಂದಃ ಏನು ಇಲ್ಲ.**

**ಮರು ವಿಚಾರಣೆಃ** ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)**

ಓದಿ ಹೇ ಕೇ ಸರಿ ಇದೆ

4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು

ಮಧುಗಿರಿ